ಆಂದೋಲನ

# ಎಚ್.ದೀಕ್ಷಿತಾಗೆ ಚಿನ್ನದ ಪದಕ

ಮೈಸೂರು: ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ನಡೆದ 24ನೇ ಘಟಿಕೋತ್ಸವ ಸಮಾರಂಭದಲ್ಲಿ ನಗರದ ಮೈಸೂರು-ಬನ್ನೂರು ರಸ್ತೆಯಲ್ಲಿರುವ ಎಟಿಎಂಇ ಕಾಲೇಜ್ ಆಫ್ ಇಂಜಿನಿಯರಿಂಗ್‌ನ ಸಿವಿಲ್ ಇಂಜಿನಿಯರಿಂಗ್ ವಿಭಾಗದ ಅಂತಿಮ ವರ್ಷದ ವಿದ್ಯಾರ್ಥಿನಿ ಎಚ್. ದೀಕ್ಷಿತಾ ಅವರಿಗೆ ರಾಜ್ಯಪಾಲ ಥಾವರ್ ಚಂದ್‌ಗೆಹ್ಲೋಟ್ ಅವರು ಚಿನ್ನದ ಪದಕ ಪ್ರದಾನ ಮಾಡಿದರು. ದೀಕ್ಷಿತಾ ಅವರು 'ಕಾಂಕ್ರೀಟ್ ಟೆಕ್ನಾಲಜಿ' ಎಂಬ ವಿಷಯದಲ್ಲಿ ವಿಶ್ವವಿದ್ಯಾಲಯ ಮಟ್ಟದಲ್ಲಿ ಅತಿ ಹೆಚ್ಚು (100ಕ್ಕೆ 99) ಅಂಕ ಗಳಿಸಿದ್ದರು. ಇದ ಕ್ಕಾಗಿ ಅವರಿಗೆ ಚಿನ್ನದ ಪದಕ ಪ್ರದಾನ ಮಾಡಲಾಗಿದೆ. ಸಾಧನೆಗೈದ ಈ ವಿದ್ಯಾರ್ಥಿನಿಯನ್ನು ಕಾಲೇಜಿನ ಆಡಳಿತ ಮಂಡಳಿ, ಪ್ರಾಂಶುಪಾಲರು, ವಿಭಾಗದ ಮುಖ್ಯಸ್ಥರು ಹಾಗೂ ಕಾಲೇಜಿನ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.



Main Edition
Jul 26, 2024 Page No. 6
Powered by: erelego.com